**Bangalore**
**Regional**
**Kannada**
**22.04.2024 / 14.30 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

೧. ರಾಜ್ಯದಲ್ಲಿ ಎರಡನೇ ಹಂತದ ಲೋಕಸಭಾ ಚುನಾವಣೆ; ಉಮೇದುವಾರಿಕೆ ಹಿಂಪಡೆಯಲು ಇಂದು ಕೊನೆಯ ದಿನ

೨. ಬೆಂಗಳೂರಿನಲ್ಲಿ ಮತದಾನ ಹೆಚ್ಚಳಕ್ಕೆ ಆಕಾಶವಾಣಿ ಮೂಲಕ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಕರೆ

೩. ಪದವಿ ಹೊಂದಿರುವವರು ಎನ್‌ಇಟಿ ಮೂಲಕ ಪಿಎಚ್‌ಡಿ ಮಾಡಬಹುದು- ವಿಶ್ವವಿದ್ಯಾಲಯ ಅನುದಾನ ಆಯೋಗ ಘೋಷಣೆ

೪. ಇಂದು ವಿಶ್ವ ಭೂಮಿ ದಿನ; ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಲು ಜಾಗೃತಿ

೫. ಐಪಿಎಲ್ ಟಿ-೨೦ ಕ್ರಿಕೆಟ್; ಜೈಪುರದಲ್ಲಿಂದು ರಾಜಸ್ಥಾನ ರಾಯಲ್ಸ್ - ಮುಂಬೈ ಇಂಡಿಯನ್ಸ್ ಹಣಾಹಣಿ

**<><*<><>*><>**

ಮೂರನೇ ಹಂತದ ಲೋಕಸಭಾ ಚುನಾವಣೆಗೆ ಉಮೇದುವಾರಿಕೆ ಹಿಂಪಡೆಯಲು ಇಂದು ಕೊನೆಯದಿನವಾಗಿದೆ. ೧೦ ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳು ಸೇರಿದಂತೆ ಒಟ್ಟು ೯೪ ಲೋಕಸಭಾ ಸ್ಥಾನಗಳಿಗೆ ಮುಂದಿನ ತಿಂಗಳು ೭ ರಂದು ಮತದಾನ ನಡೆಯಲಿದೆ. ಗುಜರಾತ್‌ನ ಎಲ್ಲಾ ೨೬ ಕ್ಷೇತ್ರಗಳು, ಕರ್ನಾಟಕದ ೧೪, ಮಹಾರಾಷ್ಟ್ರದ ೧೧, ಉತ್ತರ ಪ್ರದೇಶದ ಹತ್ತು ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದೆ. ಮಧ್ಯಪ್ರದೇಶದ ೮, ಛತ್ತೀಸ್‌ಗಢದ ೭, ಬಿಹಾರದ ೫, ಅಸ್ಸಾಂ ಮತ್ತು ಪಶ್ಚಿಮ ಬಂಗಾಳದಲ್ಲಿ ತಲಾ ೪ ಸ್ಥಾನಗಳು, ಗೋವಾ, ದಾದ್ರಾ ಮತ್ತು ನಗರ ಹವೇಲಿ, ದಮನ್ ಮತ್ತು ದಿಯುನಲ್ಲಿ ತಲಾ ೨, ಜಮ್ಮು ಮತ್ತು ಕಾಶ್ಮೀರದಲ್ಲಿ ಒಂದು ಲೋಕಸಭಾ ಕ್ಷೇತ್ರಕ್ಕೆ ಈ ಹಂತದಲ್ಲಿ ಮತದಾನ ನಡೆಯಲಿದೆ.

**<><*<><>*><>**

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡುವಂತೆ ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಕರೆ ನೀಡಿದ್ದಾರೆ. ಆಕಾಶವಾಣಿಯೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ಅವರು, ಮತದಾನ ನಿಮ್ಮ ಹಕ್ಕು. ಅಂದು ಎಲ್ಲರೂ ಪ್ರಜಾಪ್ರಭುತ್ವದ ಈ ಹಬ್ಬದಲ್ಲಿ ಪಾಲ್ಗೊಳ್ಳಿ ಎಂದು ಹೇಳಿದ್ದಾರೆ. ನಗರ ಮತದಾರರ ನಿರಾಸಕ್ತಿ ಚುನಾವಣಾ ಆಯೋಗದ ಕಳವಳಕ್ಕೆ ಕಾರಣವಾಗಿದ್ದು, ೨೦೧೯ ರ ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರಿನ ನಾಲ್ಕು ಕ್ಷೇತ್ರಗಳಲ್ಲಿ ಕಡಿಮೆ ಮತದಾನವಾಗಿತ್ತು. ಬೆಂಗಳೂರು ಉತ್ತರದಲ್ಲಿ ಶೇ.೫೪.೭೬ ಬೆಂಗಳೂರು ಕೇಂದ್ರದಲ್ಲಿ ಶೇ.೫೪.೩೨ ಮತ್ತು ಬೆಂಗಳೂರು ದಕ್ಷಿಣ ಲೋಕಸಭೆ ಕ್ಷೇತ್ರದಲ್ಲಿ ಶೇ.೫೩.೭೦ರಷ್ಟು ಮತದಾನವಾಗಿತ್ತು. ಬೆಂಗಳೂರು ಗ್ರಾಮಾಂತರದಲ್ಲಿ ಶೇ.೬೪.೯೮ರಷ್ಟು ಮತದಾನವಾಗಿತ್ತು. ತಮ್ಮ ಅವಿರತ ಪ್ರಯತ್ನದಿಂದಾಗಿ ಏಪ್ರಿಲ್ ೨೬ ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಕ್ಷೇತ್ರಗಳಲ್ಲಿ ಮತದಾನದ ಪ್ರಮಾಣ ಸುಧಾರಿಸಲಿ ಎಂದು ಹಾರೈಸಿದ್ದಾರೆ

ಧ್ವನಿ: ತುಷಾರ್ ಗಿರಿನಾಥ್

**<><*<><>*><>**

ಕರ್ತವ್ಯ ನಿರತ ನೌಕರರು ಸೌಲಭ್ಯ ಕೇಂದ್ರಗಳಲ್ಲಿ ಮತದಾನ ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ೪ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಇಂದು ಮತ್ತು ನಾಳೆಯವರೆಗೆ ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ. ನಮೂನೆ-೧೨ ರಲ್ಲಿ ಅರ್ಜಿ ಸಲ್ಲಿಸಿರುವ ಅರ್ಹ ಚುನಾವಣಾ ಕರ್ತವ್ಯ ನಿರತ ಮತದಾರರು ಹಕ್ಕು ಚಲಾಯಿಸಬಹುದು ಎಂದು ಹೇಳಿದ್ದಾರೆ. ನಮ್ಮ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಪ್ರತಿಯೊಬ್ಬರೂ ಸದ್ಬಳಕೆ ಮಾಡಬೇಕು. ಇದೇ ೨೬ ರಂದು ನಡೆಯಲಿರುವ ಚುನಾವಣೆಯಲ್ಲಿ ಯೋಗ್ಯ ನಾಯಕನ ಆಯ್ಕೆಗಾಗಿ ತಪ್ಪದೆ ಮತ ಚಲಾಯಿಸಬೇಕು ಎಂದು ಮಂಗಳೂರಿನ ಸರಕಾರಿ ರಥಬೀದಿ ಕಾಲೇಜಿನ ವಿದ್ಯಾರ್ಥಿನಿ ಗೀತಾ ಮನವಿ ಮಾಡಿದ್ದಾರೆ. ಇದೇ ಮೊದಲ ಬಾರಿಗೆ ನನಗೆ ಮತದಾನ ಮಾಡುವ ಅವಕಾಶ ದೊರೆತಿದ್ದು, ಚುನಾವಣೆಯ ದಿನವನ್ನು ಕಾತರದಿಂದ ಎದುರು ನೋಡುತ್ತಿದ್ದೇನೆ ಎಂದು ಹೇಳಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಎಲ್ಲಾ ಯುವ ಮತದಾರರು “ನಮ್ಮ ನಡೆ ಮತಗಟ್ಟೆಯ ಕಡೆ” ಧ್ಯೇಯದೊಂದಿಗೆ ಉತ್ಸಾಹದಿಂದ ಮತ ಚಲಾಯಿಸಬೇಕು ಎಂದು ಕೋಲಾರದ ವೇಮಗಲ್ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸತ್ಯನಾರಾಯಣ್ ತಿಳಿಸಿದ್ದಾರೆ. ವೇಮಗಲ್ ಪಟ್ಟಣದ ಬೂತ್‌ಗಳ ವ್ಯಾಪ್ತಿಯಲ್ಲಿ

ತಮಟೆ ವಾದ್ಯಗಳು ಹಾಗೂ ಸಾಂಪ್ರದಾಯಿಕ ಉಡುಗೆ ತೊಟ್ಟು ಪೂರ್ಣಕುಂಭಗಳೊಂದಿಗೆ ಮತದಾನ ಜಾಗೃತಿ ಮೂಡಿಸಲಾಯಿತು.

<><*<><>*><>

ನಾಲ್ಕು ವರ್ಷದ ಪದವಿ ಹೊಂದಿರುವವರು ನೇರವಾಗಿ ರಾಷ್ಟ್ರೀಯ ಅರ್ಹತಾ ಪರೀಕ್ಷೆ ಎನ್‌ಇಟಿ ಗೆ ಹಾಜರಾಗಿ, ಯಾವುದೇ ವಿಷಯದಲ್ಲಿ ಪಿಎಚ್‌ಡಿ ಪದವಿ ಗಳಿಸಬಹುದು ಎಂದು ವಿಶ್ವವಿದ್ಯಾಲಯ ಅನುದಾನ ಆಯೋಗ - ಯುಜಿಸಿ ಘೋಷಿಸಿದೆ. ಅಭ್ಯರ್ಥಿಗಳು ಕನಿಷ್ಠ ೭೫ ಪ್ರತಿಶತ ಅಂಕಗಳನ್ನು ಅಥವಾ ಅದಕ್ಕೆ ಸಮಾನವಾದ ಗ್ರೇಡಿಂಗ್ ಅಂಕಗಳು ಪಡೆದಿರುವುದು ಕಡ್ಡಾಯವಾಗಿದೆ. ಅಭ್ಯರ್ಥಿಗಳು ಯಾವುದೇ ವಿಷಯಗಳಲ್ಲಿ ಪದವಿ ಪಡೆದಿದ್ದರೂ, ತಾವು ಪಿಎಚ್‌ಡಿ ಮಾಡಲು ಬಯಸುವ ಐಚ್ಛಿಕ ವಿಷಯದಲ್ಲಿಯೇ ಪರೀಕ್ಷೆ ಎದುರಿಸಬೇಕಾಗುತ್ತದೆ ಎಂದು ಯುಜಿಸಿ ತಿಳಿಸಿದೆ.

<><*<><>*><>

ಹುಬ್ಬಳ್ಳಿಯ ನೇಹಾ ಹಿರೇಮಠ್ ಹತ್ಯೆ ಪ್ರಕರಣವನ್ನು ಸಿಐಡಿ ತನಿಖೆಗೆ ನೀಡಲು ಸರ್ಕಾರ, ನಿರ್ಧಾರ ಕೈಗೊಂಡಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದಿನಿಂದಲೇ ಸಿಐಡಿ ಅಧಿಕಾರಿಗಳು, ನೇಹಾ ಹಿರೇಮಠ್ ಹತ್ಯೆ ಪ್ರಕರಣದ ತನಿಖೆಯನ್ನು ಕೈಗೊಳ್ಳಲಿದ್ದು, ೧೨ ದಿನಗಳ ಒಳಗೆ ತನಿಖೆ ಪೂರ್ಣಗೊಳಿಸಲು ತಾಕೀತು ಮಾಡಲಾಗಿದೆ ಎಂದು ಹೇಳಿದ್ದಾರೆ. ನೇಹಾ ಹಿರೇಮಠ್ ಕೊಲೆ ಪ್ರಕರಣದಲ್ಲಿ ನೇಹಾ ಪೋಷಕರು ವ್ಯಕ್ತಪಡಿಸಿರುವ ಅನುಮಾನಗಳನ್ನು ಪರಿಗಣನೆಗೆ ತೆಗೆದುಕೊಂಡು ಸಿಐಡಿ ಅಧಿಕಾರಿಗಳು ತನಿಖೆ ಕೈಗೊಳ್ಳಲಿದ್ದು, ನೇಹಾ ಹಿರೇಮಠ್ ಪೋಷಕರಿಗೆ ನ್ಯಾಯ ದೊರಕಲಿದೆ ಎಂದು ಭರವಸೆ ನೀಡಿದ್ದಾರೆ.

<><*<><>*><>

ಈಗ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ವಿವರಗಳು :ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಅರಕೇರಿ ಮಂಜುನಾಥ

ಸರಿ ಸುಮಾರು ಒಂದೂವರೆ ದಶಕಗಳ ಇತಿಹಾಸ ಹೊಂದಿರುವ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ಭಾರತೀಯ ಜನತಾ ಪಕ್ಷದ ಭದ್ರಕೋಟೆಯಾಗಿದ್ದು, ರಾಷ್ಟ ಮತ್ತು ರಾಜ್ಯ ರಾಜಕಾರಣದಲ್ಲಿ ಈ ಕ್ಷೇತ್ರ ಮಹತ್ವದ ಪಾತ್ರ ವಹಿಸಿದೆ. ರಾಜ್ಯದ ರಾಜಧಾನಿಯಲ್ಲಿ ಬಿಜೆಪಿಯ ಭದ್ರಕೋಟೆ ಎಂದು ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ಗುರುತಿಸಿ ಕೊಂಡಿದೆ. ಈ ಕ್ಷೇತ್ರದಲ್ಲಿ ಆರಂಭದಿಂದಲೂ ಭಾರತೀಯ ಜನತಾ ಪಕ್ಷವೇ ಗೆಲುವನ್ನ ಸಾಧಿಸಿಕೊಂಡು ಬರುತ್ತಿದೆ. ೨೦೦೮ ರಲ್ಲಿ ಈ ಕ್ಷೇತ್ರವನ್ನ

ಬೆಂಗಳೂರು ಉತ್ತರ ಮತ್ತು ದಕ್ಷಿಣ ಲೋಕಸಭಾ ಕ್ಷೇತ್ರಗಳಿಂದ ವಿಭಜಿಸಿ ಒಂದು ಕ್ಷೇತ್ರವನ್ನಾಗಿ ರಚನೆ ಮಾಡಲಾಯಿತು. ಬಳಿಕ ಈ ಕ್ಷೇತ್ರಕ್ಕೆ ೨೦೦೯ ರಲ್ಲಿ ಮೊದಲ ಲೋಕಸಭೆ ಚುನಾವಣೆ ನಡೆಯಿತು. ಕ್ಷೇತ್ರದ ಮೊದಲ ಸಂಸತ್ ಸದಸ್ಯರಾಗಿ ಭಾರತೀಯ ಜನತಾ ಪಕ್ಷದ ಪಿಸಿ ಮೋಹನ್ ಆಯ್ಕೆಯಾಗಿದ್ದರು. ಬಳಿಕ ಸತತವಾಗಿ ೨೦೧೯ ವರೆಗೂ ಗೆಲುವು ಸಾಧಿಸಿಕೊಂಡು ಬಂದಿದ್ದಾರೆ. ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲಿ ೧೧ ಲಕ್ಷದ ೫೦ ಸಾವಿರ ಪುರುಷ ಮತದಾರರಿದ್ದು. ೧೦ ಲಕ್ಷದ ೫೮ಸಾವಿರ ಮಹಿಳಾ ಮತದಾರರು ಸೇರಿ ಒಟ್ಟು ೨೨ ಲಕ್ಷದ ೯ಸಾವಿರ ಮತದಾರರು ಇದ್ದಾರೆ. ಕಳೆದ ಭಾರಿ ಈ ಕ್ಷೇತ್ರದಲ್ಲಿ ಶೇಕಡಾ ೫೪ರಷ್ಟು ಮತದಾನವಾಗಿತ್ತು. ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನೊಳಗೊಂಡಿದ್ದು, ಸರ್ವಜ್ಞನಗರ, ಸಿವಿ ರಾಮನ್ ನಗರ, ಶಿವಾಜಿನಗರ, ಶಾಂತಿ ನಗರ, ಗಾಂಧಿನಗರ, ರಾಜಾಜಿನಗರ, ಚಾಮರಾಜಪೇಟೆ, ಮಹದೇವಪುರ ವಿಧಾನಸಭಾ ಕ್ಷೇತ್ರಗಳು ಇದರ ವ್ಯಾಪ್ತಿಗೆ ಬರುತ್ತವೆ. ಈ ಬಾರಿ ಬಿಜೆಪಿಯಿಂದ ಸತತ ನಾಲ್ಕನೇ ಬಾರಿ ಪಿಸಿ ಮೋಹನ್, ಕಣಕ್ಕಿಳಿದಿದ್ದಾರೆ. ಸತತವಾಗಿ ಮೂರು ಬಾರಿ ಸೋತ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಈ ಕ್ಷೇತ್ರ ಪ್ರತಿಷ್ಠೆಯ ಕಣವಾಗಿದ್ದು, ಈ ಭಾರಿ ಮನ್ಸೂರ್ ಅಲಿ ಖಾನ್ ಅವರನ್ನು ಕಣಕ್ಕೆ ಇಳಿಸಿದೆ.

<><*<><>*><>

ಇಂದು ವಿಶ್ವ ಭೂಮಿ ದಿನ. ಹವಾಮಾನ ಬದಲಾವಣೆಯ ಪರಿಣಾಮ ಮತ್ತು ಪರಿಸರ ಸಂರಕ್ಷಿಸುವ ಮಾರ್ಗಗಳ ಬಗ್ಗೆ ಜನಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ.  ಪ್ರಸಕ್ತ ವರ್ಷದ ಜಾಗತಿಕ ಭೂಮಿ ದಿನಾಚರಣೆಯ ಘೋಷವಾಕ್ಯ ಪ್ಲಾಸ್ಟಿಕ್ ವಿರುದ್ಧ ಭೂಗ್ರಹ ಎಂಬುದಾಗಿದೆ. ಈ ದಿನವನ್ನು ೧೯೭೦ರಲ್ಲಿ ಯುಎಸ್‌ಎ ನಲ್ಲಿ ಮೊದಲ ಬಾರಿಗೆ ಆಚರಿಸಲಾಯಿತು. ಆರೋಗ್ಯಕರ ಭೂಗ್ರಹ ಮತ್ತು ಉತ್ತಮ ಭವಿಷ್ಯಕ್ಕಾಗಿ ಹಾಗೂ ಪರಿಸರದ ಸಂರಕ್ಷಣೆ ಮತ್ತು ಸುಸ್ಥಿರತೆಗೆ ಪ್ರತಿಯೊಬ್ಬರ ಒಗ್ಗಟ್ಟಿನ ಶ್ರಮದ ಪ್ರಾಮುಖ್ಯತೆಯನ್ನು ಈ ದಿನ ಸಾರುತ್ತದೆ.

<><*<><>*><>

ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಿ ಭೂಮಿ ರಕ್ಷಣೆಗೆ ಪಣತೊಡಬೇಕು ಎಂದು ಚಿತ್ರದುರ್ಗ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಕರೆ ನೀಡಿದ್ದಾರೆ. ನಿತ್ಯದ ಜೀವನದಲ್ಲಿ ಅನಗತ್ಯವಾಗಿ ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿದೆ. ಇದರಿಂದ ಅಪಾರವಾದ ಪರಿಸರ ನಾಶದ ಜೊತೆಗೆ ಮನುಷ್ಯರ ಆರೋಗ್ಯದ ಮೇಲೂ ಮಾರಕ ಪರಿಣಾಮಗಳು ಉಂಟಾಗುತ್ತಿವೆ. ಸಮುದ್ರ ಸಾಗರಗಳಲ್ಲಿ ಅಪರೂಪದ ಜೀವರಾಶಿಗಳು ಅಳವಿನ ಅಂಚಿಗೆ ತಲುಪಿವೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಈ ಬಾರಿಯ ಭೂಮಿ ದಿನಾಚರಣೆಯ

ಧ್ಯೇಯವಾಕ್ಯ ಪ್ಲಾನೆಟ್ ವರ್ಸಸ್ ಪ್ಲಾಸ್ಟಿಕ್ ಎಂಬುದಾಗಿದೆ. ೨೦೪೦ರ ವೇಳೆಗೆ ಜಾಗತಿಕವಾಗಿ ಶೇ.೬೦ ರಷ್ಟು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಉದ್ದೇಶ ಹೊಂದಲಾಗಿದೆ. ಕ್ರಮೇಣವಾಗಿ ಸಂಪೂರ್ಣ ಪ್ಲಾಸ್ಟಿಕ್ ಪ್ರಪಂಚದಿಂದಲೇ ನಿರ್ಮೂಲನೆ ಮಾಡಬೇಕಿದೆ ಎಂದು ಹೇಳಿದರು.

<><*<><>*><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡ, ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ ಕ್ಕೆ ಪ್ರಾರಂಭವಾಗಲಿದೆ.

<><*<><>*><>

ಬೆಂಗಳೂರಿನಲ್ಲಿ ಐತಿಹಾಸಿಕ ಕರಗಕ್ಕೆ ಕ್ಷಣಗಣನೆ ಆರಂಭವಾಗಿದೆ. ಈ ಬಾರಿ ಸುಮಾರು ೩ ಸಾವಿರ ವೀರ ಕುಮಾರರು ಕರಗದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಚೈತ್ರ ಪೌರ್ಣಮಿ ದಿನವಾದ ನಾಳೆ ರಾತ್ರಿ ೧೨.೩೦ಕ್ಕೆ ಬೆಂಗಳೂರು ಕರಗ ಶಕ್ತ್ಯೋತ್ಸವ ನಡೆಯಲಿದೆ. ಈ ಬಾರಿಯೂ ಪೂಜಾರಿ ಎ.ಜ್ಞಾನೇಂದ್ರ ೧೪ನೇ ಬಾರಿ ಬೆಂಗಳೂರು ಕರಗ ಹೊರುತ್ತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ನಾಲ್ಕು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮದ್ಯ ನಿಷೇಧಿಸಲಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>